**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು**

**ಸಿಸಿ. ನಂಬರ್ 595/2022**

ಫ್ರಾ.ಸಾಃ 5

ಚಾಸಾಃ 9

**ದಿನಾಂಕಃ20.05.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರು | : ಡಾ. ರವೀಂದ್ರನಾಯಕ್ |
| ತಂದೆಯ ಹೆಸರು | : ತಾವರೇ ನಾಯಕ್ |
| ವಯಸ್ಸು | : 41 ವರ್ಷ |
| ಕೆಲಸ | : ವೈದ್ಯಾಧಿಕಾರಿ |
| ವಾಸ ಸ್ಥಳ | : ಮುಳಬಾಗಿಲು |

**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**

ದಿಃ 28.01.2021 ರಿಂದ ಇಲ್ಲಿಯವರೆಗೆ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 03.04.2022 ರಂದು ರಾತ್ರಿ 8.50 ಗಂಟೆ ಸಮಯಕ್ಕೆ ಚಾಸಾ 1 ರವರು ಹಲ್ಲೆಯ ಹಿನ್ನಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. **Contusion of** 5**x** 3 **cm over antero lateral aspect of lower 3$^{rd}$ of right thigh**

2. **Abrasion of** 2**x**1 **cm over posterier aspect of upper** 1/3**rd of left forearm**

3. **Tenderness over porsterier aspect of neck**

ಮೇಲೆ ಹೇಳಿದ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಈ ಕುರಿತು ಗಾಯದ ಪ್ರಮಾಣ ಪತ್ರ ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ **6** ಎಂದು ಸಾಕ್ಷಿಯ ಸಹಿಯನ್ನು ನಿಪಿ **6**(ಎ) ಎಂದು ಗುರುತಿಸಲಾಯಿತು. ಮು.ಮಾಲು **1** ದೊಣ್ಣೆಯಿಂದ ಹೊಡೆದಾಗ ನಿಪಿ**6** ರಲ್ಲಿ ನಮೂದಿಸಿರುವ ಗಾಯಗಳು ಆಗುವ ಸಾಧ್ಯತೆ ಇದೆ ಎಂದರೆ ಸರಿ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್ ಎಲ್ ವಕೀಲರಿಂದಃ</u>**

ಚಾಸಾ 1 ರವರು ಆಸ್ಪತ್ರೆಗೆ ಬಂದ ನಂತರ ಚಿಕಿತ್ಸೆ ನೀಡಿ ಒಳರೋಗಿಯಾಗಿ ದಾಖಲಿಸಿರುತ್ತೇನೆ. ಚಾಸಾ 1 ರವರು ಎಷ್ಟು ದಿನಗಳ ಕಾಲ ಒಳರೋಗಿಯಾಗಿ ದಾಖಲಾಗಿದ್ದರು ಎಂದು ಹೇಳಲು ಸಾಧ್ಯವಿಲ್ಲ. ಚಾಸಾ 1 ರವರು ಒಳರೋಗಿಯಾಗಿ ದಾಖಲಾದ ನಂತರ ಪೊಲೀಸರಿಗೆ ಮಾಹಿತಿ ನೀಡಿರುತ್ತೇನೆ. ಪೊಲೀಸರು ಆಸ್ಪತ್ರೆಗೆ ಬಂದಿರುತ್ತಾರೆ. ಸಾಮಾನ್ಯವಾಗಿ ಒಬ್ಬ ವ್ಯಕ್ತಿ ದ್ವಿಚಕ್ರ ವಾಹನದಲ್ಲಿ ಹೋಗುವಾಗ ಆಯ ತಪ್ಪಿ ಬಿದ್ದಾಗ ನಿಪಿ 6 ರಲ್ಲಿ ನಮೂದಿಸಿರುವ ಗಾಯಗಳು ಆಗುವ ಸಾಧ್ಯತೆ ಇದೆ ಎಂದರೆ ಸರಿ. ನಾನು ಸರಿಯಾಗಿ ವಿಚಾರಣೆ ಮಾಡದೇ ಸುಳ್ಳು ಗಾಯದ ಪ್ರಮಾಣ ಪತ್ರ ನೀಡಿರುತ್ತೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/-

(ಶ್ರೀಮತಿ ರೋಹಿಣಿ. ಡಿ)

**1** ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ

ಮುಳಬಾಗಿಲು